**All India Radio: Bangalore**
**Regional Bulletin In Kannada**
**15.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.04.2025 / 2.30 p.m.**
*******************

ಮುಖ್ಯಾಂಶಗಳು

೧. ಜಾತಿ ಸಮೀಕ್ಷೆಯಿಂದ ಯಾವ ಸಮುದಾಯದವರಿಗೂ ಅನ್ಯಾಯವಾಗಲು ಬಿಡುವುದಿಲ್ಲ - ಮುಖ್ಯಮಂತ್ರಿ ಸಿದ್ಧರಾಮಯ್ಯ

೨. ಜಾತಿ ಗಣತಿ ದ್ವೇಷ ಗಣತಿಯಾಗಿದೆ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪ

೩. ಯಾವುದೇ ಪ್ರಕರಣವನ್ನು ಲಘುವಾಗಿ ಪರಿಗಣಿಸಿಲ್ಲ - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ

೪. ಒಂದನೇ ತರಗತಿ ಸೇರ್ಪಡೆಗೆ ವಯೋಮಿತಿ ಸಡಿಲಿಸಿದ ಸಚಿವ ಮಧುಬಂಗಾರಪ್ಪ

೫. ರಾಜ್ಯದಲ್ಲಿ ಎರಡನೇ ದಿನಕ್ಕೆ ಕಾಲಿಟ್ಟ ಅನಿರ್ಧಿಷ್ಟಾವಧಿ ಲಾರಿ ಮುಷ್ಕರ

***************

ಉದ್ಯೋಗ ಮೇಳಗಳನ್ನು ಏರ್ಪಡಿಸುವ ಮೂಲಕ ಯುವಜನತೆಗೆ ಉದ್ಯೋಗ ನೀಡುವುದು ಸರ್ಕಾರದ ಬದ್ಧತೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕಲ್ಬುರ್ಗಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮೈಸೂರು, ಹುಬ್ಬಳ್ಳಿ, ಧಾರವಾಡದಲ್ಲಿಯೂ ಉದ್ಯೋಗ ಮೇಳವನ್ನು ಏರ್ಪಡಿಸಲಾಗುವುದು ಎಂದು ಹೇಳಿದ್ದಾರೆ.

ಜಾತಿ ಸಮೀಕ್ಷೆ ಕುರಿತಂತೆ ಪ್ರತಿಕ್ರಿಯಿಸಿ ಯಾವ ಸಮುದಾಯದವರಿಗೂ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನಾಳೆಯ ಸಚಿವ ಸಂಪುಟ ಸಭೆಯಲ್ಲಿ ಸಾಮಾಜಿಕ, ಆರ್ಥಿಕ ಸಮೀಕ್ಷೆಯ ಕುರಿತು ಚರ್ಚೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಧ್ವನಿ: ಮುಖ್ಯಮಂತ್ರಿ

ಇದೇ ವೇಳೆ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ತಮ್ಮ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿಯವರ ಆಸ್ತಿ ಮುಟ್ಟುಗೋಲು ಹಾಕುವುದು, ಚಾರ್ಜ್ ಶೀಟ್ ಹಾಕುವುದು ಬಿಜೆಪಿಯ ದ್ವೇಷದ ರಾಜಕಾರಣ ಎಂದು ಆರೋಪಿಸಿದ್ದಾರೆ.

***************

ಜಾತಿ ಗಣತಿ ದ್ವೇಷ ಗಣತಿಯಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ವೃತ್ತಿಪರ ಕೋರ್ಸ್‌ಗಳಲ್ಲಿ ೨ಎ ಪ್ರವರ್ಗದ ಎಷ್ಟು ಮಕ್ಕಳಿಗೆ ಪ್ರವೇಶ ದೊರೆತಿದೆ ಎಂದು ಪ್ರಶ್ನಿಸಿದ್ದಾರೆ.

***************

ರಾಜ್ಯದಲ್ಲಿ ಮುಸ್ಲಿಂ ಮೀಸಲಾತಿ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೀಡಿದ ಹೇಳಿಕೆಯನ್ನು ಟೀಕಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಯಾವುದೇ ನೈತಿಕ ಹಕ್ಕಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂವಿಧಾನದಲ್ಲಿ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡುವ ಪ್ರಸ್ತಾಪವಿಲ್ಲ ಎಂದು ಹೇಳಿದ್ದಾರೆ.

ಸಂವಿಧಾನದಲ್ಲಿ ಹಿಂದೂಗಳಿಗೆ ಮೀಸಲಾತಿ ನೀಡಿಲ್ಲ. ಬದಲಾಗಿ ವಿವಿಧ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಆಧಾರದ ಮೇಲೆ ಮೀಸಲಾತಿ ನೀಡಲಾಗಿದೆ ಎಂದು ಪ್ರತಿಪಾದಿಸಿದರು.

***************

ಹುಬ್ಬಳ್ಳಿ ಎನ್‌ಕೌಂಟರ್ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಲಾಗಿದ್ದು, ಸತ್ಯಾಂಶ ಹೊರಬರಲಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಯಾವುದೇ ಪ್ರಕರಣವನ್ನು ಲಘುವಾಗಿ ತೆಗೆದುಕೊಂಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಟಾಟಾ ಟ್ರಸ್ಟ್ ಕೆಲವು ಮಾನದಂಡಗಳನ್ನು ಇಟ್ಟುಕೊಂಡು ನಡೆಸಿದ ಸಮೀಕ್ಷೆಯಲ್ಲಿ ಕರ್ನಾಟಕ ಪೊಲೀಸ್ ವ್ಯವಸ್ಥೆ ಮೊದಲ ಸ್ಥಾನದಲ್ಲಿದೆ. ಈ ವರದಿಯಿಂದ ರಾಜ್ಯ ಪೊಲೀಸ್ ಇಲಾಖೆಗೆ ಹೆಚ್ಚಿನ ಉತ್ತೇಜನ ಸಿಗಲಿದೆ ಎಂದು ಪರಮೇಶ್ವರ್ ಹೇಳಿದ್ದಾರೆ.

***************

ಮಕ್ಕಳ ಶಾಲಾ ಭರ್ತಿ ವಯೋಮಿತಿ ಗೊಂದಲದಲ್ಲಿದ್ದ ಪೋಷಕರಿಗೆ ರಾಜ್ಯ ಶಿಕ್ಷಣ ಇಲಾಖೆ ಸ್ಪಷ್ಟೀಕರಣ ನೀಡಿದೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ, ೫ ವರ್ಷ ಆರು ತಿಂಗಳು ತುಂಬಿದ ಮಕ್ಕಳಿಗೆ ೧ನೇ ತರಗತಿಗೆ ಸೇರಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ. ಇದು ಈ ವರ್ಷಕ್ಕೆ ಮಾತ್ರ ಎಂದು ಸ್ಪಷ್ಟಪಡಿಸಿದ್ದಾರೆ. ಮುಂದಿನ ವರ್ಷದಿಂದ ವಯಸ್ಸು ಆರು ವರ್ಷ ಕಡ್ಡಾಯವಾಗಲಿದೆ ಎಂದು ಅವರು ತಿಳಿಸಿದ್ದಾರೆ. ಎಲ್ ಕೆ ಜಿ ನೋಂದಣಿಗೆ ೪ ವರ್ಷದ ಮಿತಿ ಕಲ್ಪಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಎಸ್ ಎಸ್ ಎಲ್ ಸಿ ಪರೀಕ್ಷೆಯನ್ನು ವಿದ್ಯಾರ್ಥಿಗಳು ಮೂರು ಬಾರಿ ಬರೆದರೆ ಅತಿ ಹೆಚ್ಚಿನ ಅಂಕವನ್ನು ಪರಿಗಣಿಸಲಾಗುವುದು ಎಂದು ಸಚಿವರ ಹೇಳಿದ್ದಾರೆ.

ಧ್ವನಿ: ಮಧು ಬಂಗಾರಪ್ಪ

***************

ರಾಜ್ಯದಲ್ಲಿ ಎರಡನೇ ದಿನಕ್ಕೆ ಕಾಲಿಟ್ಟ ಲಾರಿ ಮುಷ್ಕರ. ಸರ್ಕಾರದೊಂದಿಗೆ ಸಂಧಾನ ಸಭೆ ವಿಫಲವಾಗಿದ್ದು, ಇಂದು ಪೆಟ್ರೋಲ್, ಡಿಸೇಲ್ ಟ್ಯಾಂಕರ್‌ಗಳು ಓಡಾಟ ನಿಲ್ಲಿಸಿವೆ.

ಚಿತ್ರದುರ್ಗದಲ್ಲಿ ಲಾರಿ ಮಾಲೀಕರು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಮುಷ್ಕರ ಸರಕು ಸೇವೆಗಳ ಮೇಲೆ ಯಾವುದೇ ಪರಿಣಾಮ ಬೀರಿಲ್ಲ. ಬೇರೆ ಜಿಲ್ಲೆಗಳಿಂದ ಜಿಲ್ಲೆಗೆ ಸರಬರಾಜು ಆಗುವ ಸರಕುಗಳು ಮಿನಿ ವಾಹನಗಳಲ್ಲಿ ಸರಬರಾಜಾಗುತ್ತಿದೆ ಎಂದು ನಮ್ಮ ವರದಿಗಾರರು ವರದಿ ಮಾಡಿದ್ದಾರೆ.

***************

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಹೆಸರಿನ ಪ್ರಶಸ್ತಿ ಕೊಡುವುದರಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ.

ಬೆಳಗಾವಿಯಲ್ಲಿ ಜನಾಕ್ರೋಶ ಯಾತ್ರೆಯ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ೨೦೨೮ರಲ್ಲಿ ಕಾಂಗ್ರೆಸ್ ಪಕ್ಷ ಮನೆಗೆ ಹೋಗುವುದು ನಿಶ್ಚಿತ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ಕಾರ್ಯಗಳು ನಿಂತು ಹೋಗಿವೆ ಎಂದು ದೂರಿದ್ದಾರೆ.

***************

ತಮ್ಮದೇ ಆದ ವಿಭಿನ್ನ ಸಂಸ್ಕೃತಿ, ಆಚಾರ-ವಿಚಾರ ಕಲೆಗಳನ್ನು ಉಳಿಸಿಕೊಂಡು ಬಂದಿರುವ ಅರೆಭಾಷೆ ಜನಾಂಗ ಎಲ್ಲೆಡೆ ಪಸರಿಸುವಂತಾಗಬೇಕು ಎಂದು ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಕರೆ ನೀಡಿದ್ದಾರೆ.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ಭಾಗಮಂಡಲದಲ್ಲಿ ನಡೆದ 'ಅರೆಭಾಷೆ ಗಡಿನಾಡ ಉತ್ಸವ'ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ಥಳೀಯ ಭಾಷೆಗಳಾದ ಅರೆಭಾಷೆ, ಕೊಡವ, ತುಳು, ಕೊಂಕಣಿ, ಹೀಗೆ ವಿವಿಧ ಭಾಷೆಗಳನ್ನು ಉಳಿಸುವುದು ಅಗತ್ಯವಾಗಿದೆ ಎಂದು ಅವರು ಹೇಳಿದರು.

***************

ನಾಳೆ ವಿಶ್ವ ಹಿಮೋಫಿಲಿಯಾ ದಿನ. ಇದರ ಅಂಗವಾಗಿ ಬೆಂಗಳೂರು, ತುಮಕೂರು ಸೇರಿದಂತೆ ರಾಜ್ಯದ ವಿವಿದೆಡೆ ಒಂದು ತಿಂಗಳ ಕಾಲ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿಮೋಫಿಲಿಯಾ ಸೊಸೈಟಿ ಅಧ್ಯಕ್ಷ ಡಾ.ಸುರೇಶ್ ಹನಗವಾಡಿ ಹೇಳಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗಾರರದೊಂದಿಗೆ ಮಾತನಾಡಿದ ಅವರು, ಮಹಿಳೆಯರು ಮತ್ತು ಬಾಲಕೀಯರಲ್ಲಿ ರಕ್ತಸ್ರಾವ ಈ ವರ್ಷದ ಘೋಷ ವಾಕ್ಯವಾಗಿದ್ದು, ಈ ಕುರಿತು ಜಾಗೃತಿ ಮೂಡಿಸುವುದು ಹಾಗೂ ಮಹಿಳೆಯರ ಜೀವನ ಮಟ್ಟ ಉತ್ತಮಗೊಳಿಸುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು

೧. ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಇದೇ ೨೧ ರಿಂದ ಜೂನ್ ೪ ರವರೆಗೆ ೪೫ ದಿನಗಳ ಕಾಲ ಜಾನುವಾರುಗಳಿಗೆ ಕಾಲುಬಾಯಿ ರೋಗ ಹಾಗೂ ಚರ್ಮಗಂಟು ರೋಗದ ವಿರುದ್ಧದ ಲಸಿಕೆ ಹಾಕುವ ಅಭಿಯಾನ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

೨. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗೆ ಇಂದಿನಿಂದ ಇದೇ ೧೯ ರವರೆಗೆ ವಿಶೇಷ ಆರೋಗ್ಯ ತಪಾಸಣಾ ಶಿಬಿರಗಳು ನಡೆಯಲಿವೆ. ಇಂದು ಬೆಳ್ತಂಗಡಿ ತಾಲೂಕಿನ ಕೊಕ್ಕಡ ಹಾಗೂ ಇದೇ ೧೯ ರಂದು ಪುತ್ತೂರು ತಾಲೂಕಿನ ಪಾಣಾಜೆ ಆರೋಗ್ಯ ಕೇಂದ್ರಗಳಲ್ಲಿ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ.

೩. ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಸರ್.ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಾಳೆ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಂವಾದ ಸಭೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

೪. ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಮತ್ತಷ್ಟು ಅಭಿವೃದ್ಧಿಗೊಳಿಸುವ ಕುರಿತಂತೆ ಪ್ರವಾಸ ಸ್ಥಳಗಳನ್ನು ಅಧ್ಯಯನ ಮಾಡಿ, ಸಮಗ್ರವಾದ ವರದಿ ಸಲ್ಲಿಸುವಂತೆ ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ಡಾ. ರಾಜೇಂದ್ರ ಕೆ.ವಿ. ಸೂಚಿಸಿದ್ದಾರೆ.

೫. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ತಾಂತ್ರಿಕ ಕೋರ್ಸ್‌ಗಳ ಅಧ್ಯಯನ ಮಾಡುವುದರಿಂದ ಕೌಶಲ್ಯ ನೈಪುಣ್ಯತೆ ವೃದ್ಧಿಯಾಗಲಿದೆ ಎಂದು ವಿಜಯನಗರದ ಜಿಟಿಟಿಸಿ ಕಾಲೇಜು ಪ್ರಾಚಾರ್ಯರಾದ ಡಿ.ಅಂಜನ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

೬. ೨೦೨೫-೨೦೨೬ನೇ ಸಾಲಿನಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದಕ್ಷಿಣ ಕನ್ನಡ ಜಿಲ್ಲೆಯ ಬೋಂದೆಲ್‌ನಲ್ಲಿರುವ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ನಲ್ಲಿ ವಿವಿಧ ಕೋರ್ಸ್‌ಗಳಿಗೆ ಸೇರಲು ಅರ್ಜಿ ಆಹ್ವಾನಿಸಲಾಗಿದೆ.

೭. ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಬುಧವಾರ ನಗರದ ವಿಬಿ ದರಬಾರ ಕಾಲೇಜಿನಲ್ಲಿ ನಡೆದ ಸಾಮಾನ್ಯ ಪ್ರವೇಶ ಪರೀಕ್ಷಾ-ಸಿಇಟಿ ಕೇಂದ್ರಕ್ಕೆ ಭೇಟಿ ನೀಡಿ, ಪರೀಕ್ಷಾ ವ್ಯವಸ್ಥೆ, ವಿದ್ಯಾರ್ಥಿಗಳ ಆಸನ ವ್ಯವಸ್ಥೆ, ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಅಧಿಕಾರಿ, ಸಿಬ್ಬಂದಿಗಳ ಕಾರ್ಯ ವಿಧಾನ ಪರಿಶೀಲಿಸಿದರು. ಪರೀಕ್ಷಾ ಪ್ರಕ್ರಿಯೆ ನಿರ್ವಹಣೆಗೆ ನಿಯೋಜಿತ ಅಧಿಕಾರಿಗಳು ಪರೀಕ್ಷಾ ಮಾರ್ಗಸೂಚಿಯನ್ವಯ ಕಾರ್ಯ ನಿರ್ವಹಣೆ ಹಾಗೂ ಅವರಿಂದ ಪರೀಕ್ಷಾ ಕಾರ್ಯದ ಬಗ್ಗೆ ಮಾಹಿತಿ ಪಡೆದುಕೊಂಡರು.

*******ಮುಕ್ತಾಯ*******